# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 547(561)
ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 11.12.2025
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಉತ್ತರ ಭಾರತದ ವಾರಣಾಸಿಯಲ್ಲಿ ನಡೆಯುವ ಗಂಗಾರತಿ ಮಾದರಿಯಲ್ಲಿ ರಾಜ್ಯ ಸರ್ಕಾರ ಕಾವೇರಿ ಆರತಿಯನ್ನು ಆರಂಭಿಸಿದೆಯೇ; | ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕು, ಕೃಷ್ಣರಾಜಸಾಗರ ಬೃಂದಾವನ ಉದ್ಯಾನವನದಲ್ಲಿ ದಸರಾ ಹಬ್ಬದ ಸಮಯದಲ್ಲಿ ದಿನಾಂಕ:26.09.2025 ರಿಂದ ದಿನಾಂಕ:30.09.2025 ರವರೆಗೆ ತಾತ್ಕಾಲಿಕ ವ್ಯವಸ್ಥೆಯೊಂದಿಗೆ ಕಾವೇರಿ ಆರತಿ ಕಾರ್ಯಕ್ರಮವನ್ನು ಆಯೋಜಿಸಲಾಗಿರುತ್ತದೆ. |
| (ಆ) | ಆರಂಭಿಸಿದ್ದಲ್ಲಿ, ಇದೇ ಮಾದರಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜೀವನದಿ ಕೃಷ್ಣೆಗೂ ಆರತಿ ಬೆಳಗುವ ಕಾರ್ಯಕ್ರಮವನ್ನು ಜಾರಿಗೆ ತರಬೇಕೆಂಬ ಕೂಗು ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿರುವ ಎಲ್ಲಾ ನದಿ ಪಾತ್ರಗಳಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಿ ನಮ್ಮ ಸಂಸ್ಕೃತಿ-ಪರಂಪರೆಯನ್ನು ಬಿಂಬಿಸುವ ಹಾಗೂ ನಮ್ಮ ಧಾರ್ಮಿಕ ಭಾವನೆಗಳನ್ನು ಗೌರವಿಸುವ ಜೊತೆಗೆ ಸ್ಥಳೀಯ ಜನರಿಗೆ ಉದ್ಯೋಗವಕಾಶವನ್ನು ಕಲ್ಪಿಸುವ ಯೋಜನೆಯನ್ನು ಹಾಕಿಕೊಂಡು ಜಲಸಂಪನ್ಮೂಲ, ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಹಾಗೂ ಧಾರ್ಮಿಕ ದತ್ತಿ ಇಲಾಖೆಗಳನ್ನು ಒಳಗೊಂಡಂತೆ ಯೋಜನೆಗಳನ್ನು ರೂಪಿಸುವುದು ಸರ್ಕಾರದ ಉದ್ದೇಶವಾಗಿದೆ.<br><br>ಈ ಮೂಲಕ ರಾಜ್ಯದಲ್ಲಿರುವ ಕೃಷ್ಣಾ ನದಿ ಒಳಗೊಂಡಂತೆ ಎಲ್ಲಾ ನದಿ ಪಾತ್ರಗಳಲ್ಲಿ ಮೇಲ್ಕಂಡಂತೆ ಕಾರ್ಯಕ್ರಮಗಳನ್ನು ಕೈಗೊಳ್ಳಲು ಪರಿಶೀಲಿಸಲಾಗುವುದು. |
| (ಇ) | ಬಂದಿದ್ದಲ್ಲಿ, ಆದಷ್ಟು ಬೇಗ ಕೃಷ್ಣಾರತಿಯನ್ನು ನೆರವೇರಿಸಲು ಹಾಗೂ ಈ ಸಂಬಂಧ ಅಗತ್ಯ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸುವುದೇ? | |

ಸಂ: ಜಸಂಇ 79 ಎನ್‌ಎಲ್‌ಎ 2025

(ಡಿ. ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ